ಕರ್ನಾಟಕ ಸರ್ಕಾರ

ಡಿಸೆಂಬರ್ 24 , 2016

# ಹಿರಿಯ ನಟ ಚೇತನ್ ರಾಮರಾವ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

**ಬೆಂಗಳೂರು, ಡಿಸೆಂಬರ್ 24 :**

ಹಿರಿಯ ನಟ ವಿ. ಚೇತನ್ ರಾಮರಾವ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ತಮ್ಮ ಐದು ದಶಕಗಳ ಬಣ್ಣದ ಬದುಕಿನಲ್ಲಿ 300 ಕ್ಕೂ ಹೆಚ್ಚು ಚಿತ್ರಗಳಲ್ಲಿ ಪೋಷಕ ಪಾತ್ರಗಳಿಗೆ ಜೀವ ತುಂಬಿದ ಚೇತನ್ ರಾಮ್‌ರಾವ್ ಅವರು ಕನ್ನಡ ಚಿತ್ರರಂಗದಲ್ಲಿ ತಮ್ಮದೇ ಛಾಪು ಮೂಡಿಸಿದ್ದರು. ಸುಗಮ ಜೀವನ ನಡೆಸಲು ತಮ್ಮ ಇಳಿ ವಯಸ್ಸಿನಲ್ಲೂ ಅಭಿನಯಕ್ಕಾಗಿ ಅವಕಾಶಗಳನ್ನು ಅಪೇಕ್ಷಿಸಿದರೇ ಹೊರತು ಆರ್ಥಿಕ ನೆರವು ಬಯಸಿರಲಿಲ್ಲ ಎಂಬುದು ಚೇತನ್ ರಾಮರಾವ್ ಅವರಲ್ಲಿನ ಸ್ವಾಭಿಮಾನಕ್ಕೆ ಸಾಕ್ಷಿ ಎಂದು ಮುಖ್ಯಮಂತ್ರಿ ತಮ್ಮ ಸಂದೇಶದಲ್ಲಿ ಬಣ್ಣಿಸಿದ್ದಾರೆ.

ಚೇತನ್ ರಾಮರಾಮ್ ಅವರ ಆತ್ಮಕ್ಕೆ ಶಾಂತಿ ದೊರೆಯಲಿ. ಅವರ ಕುಟುಂಬ ವರ್ಗಕ್ಕೆ ದುಃಖ ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಭಗವಂತನಲ್ಲಿ ಮುಖ್ಯಮಂತ್ರಿ ಪ್ರಾರ್ಥಿಸಿದ್ದಾರೆ.

ಮೈಸೂರಿನ ಕುವೆಂಪು ನಗರದಲ್ಲಿರುವ ಚೇತನ್ ರಾಮರಾವ್ ಅವರ ನಿವಾಸಕ್ಕೆ ತೆರಳಿ ಅವರ ಪಾರ್ಥಿವ ಶರೀರದ ಮೇಲೆ ಪುಷ್ಪಗುಚ್ಛವಿರಿಸಿ ಮುಖ್ಯಮಂತ್ರಿ ಗೌರವ ಸಲ್ಲಿಸಿದರು.

****************

ಡಿ ಪಿ ಎಂ